**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ದಿನಾಂಕ 13 ನೇ ಮಾಹೆ ಮಾರ್ಚ್ 2023**

**ಸಿ.ಸಿ.ಸಂ.34/2021**

ಪಿರ್ಯಾದುದಾರರು : ರಾಜ್ಯದ ಪರ ಬೆಟ್ಟದಪುರ ಠಾಣಾ ಆರಕ್ಷಕರು
(ಸಹಾಯಕ ಸರ್ಕಾರಿ ಅಭಿಯೋಜಕರವರಿಂದ)

ವಿರುದ್ಧ

ಆರೋಪಿ : ಅಶ್ವತ್.ಎಂ.,
ಬಿನ್ ಕರಿಯನಾಯಕ,
ವಯಸ್ಸು 31 ವರ್ಷ,
ವೃತ್ತಿಃ ವ್ಯವಸಾಯ,
ವಾಸಃ ಮಂಟಿಬಿಳಗುಳಿ ಗ್ರಾಮ,
ಪಿರಿಯಾಪಟ್ಟಣ ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ.ಶ್ವೇತ.ಜೆ., *ಬಿ.ಕಾಂ., ಎಲ್.ಎಲ್.ಬಿ,* ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಪಿರಿಯಾಪಟ್ಟಣ ಆದ ನಾನು ಆರೋಪಿಯಾದ ನಿಮ್ಮ ವಿರುದ್ದ ಮಾಡುವ ದೋಷಾರೋಪಣೆ ಏನೆಂದರೆ,

ಮೊದಲನೇಯದಾಗಿ, ದಿನಾಂಕ 28.09.2020 ರಂದು ಮಧ್ಯಾಹ್ನ 3.30 ಗಂಟೆಯ ಸಮಯದಲ್ಲಿ, ಪಿರಿಯಾಪಟ್ಟಣ ತಾಲ್ಲೂಕು, ಬೆಟ್ಟದಪುರ ಪೊಲೀಸ್ ಠಾಣಾ ಸರಹದ್ದು, ಮಂಟಿಬಿಳಗುಳಿ ಗ್ರಾಮದ ಶಿವನಾಯಕ ಎಂಬುವವರ ಮನೆಯ ಬಳಿ ಆರೋಪಿತನಾದ ನೀವು ಚಾಸಾ.1 ಬಸವನಾಯಕರವರು ಕೆಲಸ ಮಾಡುತ್ತಿರುವಾಗ ಪಕ್ಕದ ಮನೆಯಲ್ಲಿ ಇಟ್ಟಿದ್ದ ನನ್ನ ಮೊಬೈಲ್ ನ್ನು ನೀನೇ ತೆಗೆದುಕೊಂಡಿದ್ದೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈಯ್ದು ನಿಂದಿಸಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ.504 ರ** ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪಣೆ ಮಾಡಲಾಗಿದೆ.

ಎರಡನೇಯದಾಗಿ, ಮೇಲೆ ಹೇಳಿದ ಸ್ಥಳ ಮತ್ತು ಸಮಯದಲ್ಲಿ, ಆರೋಪಿಯಾದ ನೀವು ಚಾಸಾ.1 ರವರಿಗೆ ಮೊಬೈಲ್ ಪೋನ್ ನ್ನು ನೀನೇ ತೆಗೆದುಕೊಂಡಿದ್ದೀಯಾ ನಡಿ ಪೊಲೀಸ್ ಠಾಣೆಗೆ ಹೋಗೋಣ ಎಂದು ತನ್ನ ಕೈಗಳಿಂದ ಚಾಸಾ.1 ರವರ ಮೈಕೈಗೆ

ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 323** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪಣೆ ಮಾಡಲಾಗಿದೆ.

ಎರಡನೇಯದಾಗಿ, ಆರೋಪಿಯಾದ ನೀವು ಚಾಸಾ.1 ರವರಿಗೆ ಮೊಬೈಲ್ ಫೋನ್ನ್ನು ನೀನೇ ತೆಗೆದುಕೊಂಡಿದ್ದೀಯಾ ನಡಿ ಪೊಲೀಸ್ ಠಾಣೆಗೆ ಹೋಗೋಣ ಎಂದು ಪೊಲೀಸ್ ಠಾಣೆಗೆ ಕರೆದುಕೊಂಡು ಹೊಗದೇ ಕಗ್ಗುಂಡಿ ಗ್ರಾಮದ ತಂಬಾಕು ಮಂಡಳಿ ಬಳಿ ಇರುವ ನೀಲಗಿರಿ ತೋಪಿನ ಬಳಿ ಕರೆದುಕೊಂಡು ಹೋಗಿ ದೊಣ್ಣೆಯಿಂದ ಚಾಸಾ.1 ರವರ ಎಡಗೈಗೆ, ಕುಂಡಿಗಳಿಗೆ ಮತ್ತು ಕೆಳತುಟಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ 324** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪಣೆ ಮಾಡಲಾಗಿದೆ.

ಕೊನೇಯದಾಗಿ, ಮೇಲೆ ಹೇಳಿದ ಸ್ಥಳ ಮತ್ತು ಸಮಯದಲ್ಲಿ, ಆರೋಪಿಯಾದ ನೀವು 'ನನ್ನ ಮೊಬೈಲ್ನ್ನು ನೀನೇ ತೆಗೆದುಕೊಂಡಿದ್ದೀಯ, ಕೊಡದಿದ್ದರೆ ನಿನ್ನನ್ನು ಕೊಲೆ ಮಾಡುತ್ತೇನೆ' ಎಂದು ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು **ಭಾರತ ದಂಡ ಸಂಹಿತೆ ಕಲಂ.506 ರ** ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪಣೆ ಮಾಡಲಾಗಿದೆ.

ಈ ಮೇಲ್ಕಂಡ ದೋಷಾರೋಪಣೆಗೆ ನೀವು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿದ್ದೇನೆ.

**(ಶ್ವೇತ.ಜೆ)**
ಹೆಚ್ಚುವರಿ ಸಿವಿಲ್ ನ್ಯಾಯಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿ,
ಪಿರಿಯಾಪಟ್ಟಣ.